## ಕರ್ನಾಟಕ ಸರ್ಕಾರ

**ಕಡತ ಸಂಖ್ಯೆ:** ಎ2/ಸಿಬ್ಬಂದಿ/ಅ.ವೀ.ನೇ.ನೇ/
ಸಿಆರ್-06/2023-24

ಸುಲ್ತಾನ್ ಷರೀಫ್ ವೃತ್ತ, ಸತ್ಯಮಂಗಲ ರಸ್ತೆ,
ಚಾಮರಾಜನಗರ - 571313
ದೂರವಾಣಿ : ಕಛೇರಿ : 08226-226229
ಇ-ಮೇಲ್ : chncirccf@gmail.com
**ದಿನಾಂಕ: 26.02.2024**

## ಅರಣ್ಯ ಸಂರಕ್ಷಣಾಧಿಕಾರಿಗಳ ಕಛೇರಿ, ಚಾಮರಾಜನಗರ ವೃತ್ತ, ಚಾಮರಾಜನಗರ

ಗೆ,

**ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು,**
(ಸಂಪರ್ಕ ಮತ್ತು ಮಾಹಿತಿ),
ಅರಣ್ಯ ಭವನ, ಮಲ್ಲೇಶ್ವರಂ,
**ಬೆಂಗಳೂರು.**

ಮಾನ್ಯರೇ,

ವಿಷಯ : ಅರಣ್ಯ ವೀಕ್ಷಕ ಹುದ್ದೆಯ ದೈಹಿಕ ತಾಳ್ವಿಕೆ ಪರೀಕ್ಷಕೆ ಮತ್ತು ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆ ಕುರಿತಂತೆ ಇಲಾಖಾ ವೆಬ್ ಸೈಟ್ ನಲ್ಲಿ ಪ್ರಕಟಿಸುವ ಕುರಿತು.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಚಾಮರಾಜನಗರ ವೃತ್ತಕ್ಕೆ ಸಂಬಂಧಿಸಿದ 27 ಅರಣ್ಯ ವೀಕ್ಷಕ ಹುದ್ದೆಯ ನೇರ ನೇಮಕಾತಿಗೆ ಸಂಬಂಧಿಸಿದಂತೆ ದಿನಾಂಕ: 22.02.2024 ರಂದು ಪ್ರಕಟಿಸಲಾದ 1:20 ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ದಿನಾಂಕ: 29.02.2024 ರಿಂದ 03.03.2024 ರವರೆಗೆ ದೈಹಿಕ ತಾಳ್ವಿಕೆ ಪರೀಕ್ಷಕೆ ಮತ್ತು ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಯನ್ನು ಡಾ॥ ಬಿ.ಆರ್.ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣ, ಚಾಮರಾಜನಗರ ಇಲ್ಲಿ ಏರ್ಪಡಿಸಲಾಗಿದೆ. ಈ ಕುರಿತಂತೆ ಪ್ರಕಟಣೆಯನ್ನು ಈ ಪತ್ರದೊಂದಿಗೆ ಲಗತ್ತಿಸಿದ್ದು, ಸದರಿ ಮಾಹಿತಿಯನ್ನು ಇಲಾಖಾ ವೆಬ್ ಸೈಟ್ ನಲ್ಲಿ ಪ್ರಕಟಿಸುವಂತೆ ಕೋರಲಾಗಿದೆ.

ಗೌರವಗಳೊಂದಿಗೆ.

ತಮ್ಮ ನಂಬುಗೆಯ,

ಅರಣ್ಯ ಸಂರಕ್ಷಣಾಧಿಕಾರಿ,
ಚಾಮರಾಜನಗರ ವೃತ್ತ,
ಚಾಮರಾಜನಗರ.

ಕರ್ನಾಟಕ ಸರ್ಕಾರ
ಅರಣ್ಯ ಇಲಾಖೆ

**ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಆಯ್ಕೆ ಪ್ರಾಧಿಕಾರ**
**ರವರ ಕಛೇರಿ, ಚಾಮರಾಜನಗರ ವೃತ್ತ, ಚಾಮರಾಜನಗರ**

**ಅಧಿಸೂಚನೆ ಸಂಖ್ಯೆ: ಎ2/ಸಿಬ್ಬಂದಿ/ಅ.ವೀ.ನೇ.ನೇ/ಸಿಆರ್-06/2023-24**
**ದಿನಾಂಕ: 16.09.2023 ರಂತೆ**

**2023-24ನೇ ಸಾಲಿನಲ್ಲಿ 32 ಅರಣ್ಯ ವೀಕ್ಷಕ ಗ್ರೂಪ್ 'ಡಿ' ವೃಂದದ ಹುದ್ದೆಗಳಿಗೆ**
**ನೇರ ನೇಮಕಾತಿ**

# ಪ್ರಕಟಣೆ

ಸರ್ಕಾರದ ಅಧಿಸೂಚನೆ ಸಂಖ್ಯೆ: FEE 203 FEG 2015 ದಿನಾಂಕ: 06.08.2019 ರ ಕರ್ನಾಟಕ ಅರಣ್ಯ ಇಲಾಖಾ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳು, 2019 ರನ್ವಯ ಅರಣ್ಯ ವೀಕ್ಷಕ ವೃಂದಕ್ಕೆ ಸಂಬಂಧಿಸಿದಂತೆ ಮುಖ್ಯ/ಅರಣ್ಯ ಸಂರಕ್ಷಣಾಧಿಕಾರಿಗಳು ಆಯ್ಕೆ ಪ್ರಾಧಿಕಾರವಾಗಿರುತ್ತಾರೆ.

ದಿನಾಂಕ: 14.02.2024 ರಂದು ಪ್ರಕಟಿಸಲಾದ 1:20 (ಹುದ್ದೆ:ಅಭ್ಯರ್ಥಿ) ತಾತ್ಕಾಲಿಕ ಅರ್ಹತಾ ಪಟ್ಟಿಗೆ ಸ್ವೀಕೃತವಾದ ಆಕ್ಷೇಪಣೆಗಳನ್ನು ನಿಯಮಾನುಸಾರ ವಿಲೇ ಮಾಡಿ, ಅರ್ಹ ಅಭ್ಯರ್ಥಿಗಳ 1:20 ಅಂತಿಮ ಆಯ್ಕೆ ಪಟ್ಟಿಯನ್ನು ದಿನಾಂಕ: 22.02.2024 ರಂದು ಪ್ರಕಟಣೆಯನ್ನು ಪ್ರಕಟಿಸಲಾಗಿರುತ್ತದೆ. **ಸದರಿ ಪಟ್ಟಿಯಲ್ಲಿರುವ ಅಭ್ಯರ್ಥಿಗಳಿಗೆ ದಿನಾಂಕ: 29.02.2024 ರಿಂದ 03.03.2024 ರವರೆಗೆ ದೈಹಿಕ ತಾಳ್ವಿಕೆ ಪರೀಕ್ಷೆ [Physical Endurance Test], ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆ [Physical Efficiency Test] ಹಾಗೂ ದೇಹ ದಾರ್ಢ್ಯತೆ ಪರೀಕ್ಷೆ [Physical Standard Test] ಹಾಗೂ ಮೂಲ ದಾಖಲಾತಿ ಪರಿಶೀಲನೆಯನ್ನು ಡಾ|| ಬಿ.ಆರ್.ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣ, ಚಾಮರಾಜನಗರ ಇಲ್ಲಿ ನಡೆಸಲಾಗುತ್ತಿದ್ದು, ಅರ್ಹ ಅಭ್ಯರ್ಥಿಗಳು ದಿನಾಂಕ: 29.02.2024 ರಂದು ಬೆಳಿಗ್ಗೆ 6.30 ಗಂಟೆಗೆ ಸರಿಯಾಗಿ ಈ ಕೆಳಕಂಡ ದಾಖಲಾತಿಗಳೊಂದಿಗೆ ಹಾಜರಾಗುವುದು.**

1. ಅರ್ಜಿಯನ್ನು ನಮೂದಿಸಿದ ಎಲ್ಲಾ ಮೂಲ ದಾಖಲಾತಿಗಳು.
2. ಆನ್ ಲೈನ್ ನಲ್ಲಿ ಅಪ್ ಲೋಡ್ ಮಾಡಿರುವ ಎಲ್ಲಾ ಮೂಲ ದಾಖಲಾತಿಗಳು ಮತ್ತು ಮೂಲ ದಾಖಲೆಗಳ ಒಂದು ಸೆಟ್ ಜೆರಾಕ್ಸ್ (ಗೆಜೆಟೆಡ್ ಅಧಿಕಾರಿಯವರಿಂದ ದೃಢೀಕರಿಸಿದ) ಪ್ರತಿ.
3. ಅಭ್ಯರ್ಥಿಯ ಇತ್ತೀಚಿನ Pass Port ಅಳತೆಯ 5 ಭಾವಚಿತ್ರಗಳೊಂದಿಗೆ ಹಾಜರಾಗುವುದು.
4. ಅಧಿಸೂಚನೆಯಲ್ಲಿ ನಮೂದಿಸಿದ ಯಾವುದಾದರೂ ಒಂದು ಗುರುತಿನ ಚೀಟಿಯ ಮೂಲ ಪ್ರತಿ ಹಾಗೂ 2 ಸ್ವಯಂ ದೃಢೀಕೃತ ಪ್ರತಿಯನ್ನು ಸಲ್ಲಿಸುವುದು.
5. ಸಾಮಾನ್ಯ ಅಂಗವಿಕಲ ಅಭ್ಯರ್ಥಿ ಮೀಸಲಾತಿ ಕೋರಿ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ವೈದ್ಯಕೀಯ ಪರೀಕ್ಷೆ ಸಂದರ್ಭದಲ್ಲಿ ಅಭ್ಯರ್ಥಿಗಳ ಅಂಗವಿಕಲತೆಯನ್ನು ದೃಢೀಕರಿಸಲು ಆಧಾರವಾಗಿರುವ ಎಲ್ಲಾ ಸಂಬಂಧಿಸಿದ ವೈದ್ಯಕೀಯ ದಾಖಲಾತಿಗಳನ್ನು ಹಾಜರುಪಡಿಸುವುದು.
6. ಸ್ಥಳೀಯ ಅರಣ್ಯ ಬುಡಕಟ್ಟು ಪರಿಶಿಷ್ಟ ಪಂಗಡ [Local Forest Dwelling Tribes] ಪ್ರವರ್ಗದಡಿಯಲ್ಲಿ ಮೀಸಲಾತಿ ಕೋರಿ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಮೂಲ ದಾಖಲಾತಿಗಳ ಪರಿಶೀಲನಾ ಸಮಯದಲ್ಲಿ ಅಧಿಸೂಚನೆಯಲ್ಲಿ ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ದೃಢೀಕರಿಸಿ ಪಡೆದ ವಾಸಸ್ಥಳ ಪ್ರಮಾಣ ಪತ್ರವನ್ನು ಇನ್ನಿತರೆ ಮೂಲ ದಾಖಲಾತಿಗಳೊಂದಿಗೆ ಹಾಜರುಪಡಿಸತಕ್ಕದ್ದು.
7. ಮೇಲ್ಕಂಡ ಪ್ರಕ್ರಿಯೆಯು ಒಂದು ದಿನಕ್ಕಿಂತ ಹೆಚ್ಚಿನ ದಿನ ನಡೆಯುವ ಸಂಭವವಿರುವುದರಿಂದ ತಂಗುವಿಕೆಗೆ ಎಲ್ಲಾ ಪೂರ್ವ ಸಿದ್ಧತೆಗಳೊಂದಿಗೆ ಹಾಜರಾಗಲು ತಿಳಿಸಿದೆ. ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ತಂಗುವ ವ್ಯವಸ್ಥೆಯನ್ನು ಮಾಡಿಕೊಳ್ಳುವುದು. ಪ್ರಯಾಣ ಭತ್ಯೆ ಇನ್ನಿತರ ಭತ್ಯೆಗಳನ್ನು ಇಲಾಖೆಯಿಂದ ನೀಡಲಾಗುವುದಿಲ್ಲ.
8. ಹಾಜರಾಗಲು ನಿಗಧಿಪಡಿಸಿದ ದಿನಾಂಕದಲ್ಲಿ ಯಾವುದೇ ಬದಲಾವಣೆ ಮಾಡಿಕೊಳ್ಳಲು ಅವಕಾಶ ನೀಡಲಾಗುವುದಿಲ್ಲ. ಮೇಲ್ಕಂಡ ದಿನಾಂಕದಂದು ನೀವು ಹಾಜರಾಗದೇ ಇದ್ದ ಪಕ್ಷದಲ್ಲಿ ಅರಣ್ಯ ವೀಕ್ಷಕ ಹುದ್ದೆಗೆ ಸೇರಲು ನಿಮಗೆ ಇಚ್ಛೆ ಇಲ್ಲವೆಂದು ಭಾವಿಸಿ ನಿಮ್ಮ ಹೆಸರನ್ನು ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು.
9. ದೈಹಿಕ ತಾಳ್ವಿಕೆ ಮತ್ತು ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಗಳಲ್ಲಿ ಯಾವುದೇ ಅವಘಡ ಸಂಭವಿಸಿದಲ್ಲಿ ಇಲಾಖೆಯು ಹೊಣೆಗಾರರಾಗುವುದಿಲ್ಲ.
10. ಅಭ್ಯರ್ಥಿಯು ಗರ್ಭಿಣಿಯರಾಗಿದ್ದಲ್ಲಿ ದೈಹಿಕ ತಾಳ್ವಿಕೆ, ದೈಹಿಕ ಸಮರ್ಥತೆ ಪರೀಕ್ಷೆಗೆ ಭಾಗವಹಿಸುವ ಕುರಿತು ವಿನಾಯಿತಿ ನೀಡುವಂತೆ ಕೋರಿ ವೈದ್ಯಕೀಕಯ ದೃಢೀಕರಣ ಪತ್ರದೊಂದಿಗೆ ಮನವಿ ಪತ್ರವನ್ನು ಈ ಪರೀಕ್ಷೆಗಳು ನಡೆಯುವ ಪರೀಕ್ಷಾ ಕೇಂದ್ರದ ಆಯ್ಕೆ ಪ್ರಾಧಿಕಾರದ ಮುಖ್ಯ/ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ನೀಡಿದ್ದಲ್ಲಿ ವಿನಾಯಿತಿ ನೀಡಲಾಗುವುದು.

ದಿನಾಂಕ: 26.02.2024
ಸ್ಥಳ : ಚಾಮರಾಜನಗರ

ಅರಣ್ಯ ಸಂರಕ್ಷಣಾಧಿಕಾರಿ ಹಾಗೂ
ಆಯ್ಕೆ ಪ್ರಾಧಿಕಾರ
ಚಾಮರಾಜನಗರ ವೃತ್ತ, ಚಾಮರಾಜನಗರ